ವ್ಯಾವಹಾರಿಕ ನ್ಯಾಯಾಧೀಶರು ಮತ್ತು ಮುಖ್ಯ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ
ಮೂಡಬಿದಿರೆ

ಸಿಸಿ ನಂ. 295/2018,

ಚಾಸಾ- 11, ಫ್ರಾಸಾ -5

| | |
|---|---|
| ಹೆಸರು | ಬಾಬು ಬಂಗೇರಾ |
| ತಂದೆಯ ಹೆಸರು | ಐತಪ್ಪ |
| ವಯಸ್ಸು | 63 ವರ್ಷ |
| ಕೆಲಸ | ಕೃಷಿ |
| ವಾಸ | ಮಾವಿನ ಕಟ್ಟೆ |
| ಪ್ರಮಾಣೀಕರಿಸಿದ ದಿನಾಂಕ | 02-07-2025 |

ಮುಖ್ಯ ವಿಚಾರಣೆಃ ಮಾನ್ಯ ಸಹಾಯಕ ಸರಕಾರಿ ಅಭಿಯೋಜಕರಿಂದಃ

1. ಆರೋಪಿ ಗೊತ್ತಿಲ್ಲ . ಸಾಕ್ಷಿಗೆ ಒಂದು ದಾಖಲೆಯನ್ನು ನೋಡಿ , ಸದರಿ ದಾಖಲೆಯಲ್ಲಿ ಇರುವ ಸಹಿಯನ್ನು ನೋಡಿ ಗುರುತಿಸಿ , ಕಳ್ಳತನದ ಪ್ರಕರಣಕ್ಕಾಗಿ ಸಹಿಯನ್ನು ಹಾಕಿರುತ್ತೇನೆ ಎಂದು ಹೇಳಿದ ಮೇರೆಗೆ , ಸದರಿ ದಾಖಲೆಯನ್ನು ನಿಪಿ-6 ಎಂದು , ಸಾಕ್ಷಿಯ ಸಹಿಯನ್ನು ನಿಪಿ-6(ಎ) ಎಂದು ಗುರುತಿಸಲಾಯಿತು . ಸದರಿ ದಾಖಲೆಗೆ ಪೊಲೀಸರು ನನಗೆ ಹೇಳಿದ ಕಾರಣ ನಾನು ನಿಪಿ-10 ಕ್ಕೆ ಸಹಿ ಮಾಡಿರುತ್ತೇನೆ . ನನ್ನ ಸಮಕ್ಷಮ ಯಾವುದೇ ಸ್ವತ್ತುಗಳನ್ನು ಸ್ವಾಧೀನ ಪಡಿಸಿಕೊಂಡಿರುವುದಿಲ್ಲ . ಈ ಬಗ್ಗೆ ನಾನು ಪೊಲೀಸರಿಗೆ ಯಾವುದೇ ಹೇಳಿಕೆಯನ್ನು ನೀಡಿರುವುದಿಲ್ಲ .

*(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ವಿಚಾರಣೆ ಮಾಡಲು ಮಾನ್ಯ ಸ ಸ ಅ ರವರು ಅನುಮತಿ ಕೋರಿದ್ದು ಅನುಮತಿ ನೀಡಲಾಯಿತು.)*

ಪಾಟೀ ಸವಾಲುಃ ಮಾನ್ಯ ಸ ಸ ಅ ರವರಿಂದಃ

ದಿಃ 22-11-2017 ರಂದು ಪೊಲೀಸರು ನನ್ನನ್ನು ಠಾಣೆಗೆ ಬರುವಂತೆ ವಿನಂತಿಸಿದ

ಮೇರೆಗೆ ..............................................................................................

..............................................................................................

ನಂತರ ಆರೋಪಿಯು ಮೂಡಬಿದ್ರೆ ವೆಂಕಟರಮಣ ದೇವಸ್ಥಾನದ ಬಳಿ ಮತ್ತು ಸರ್ಕಾರಿ ಆಸ್ಪತ್ರೆಯ ಬಳಿ ಮೊಬೈಲುಗಳನ್ನು ಕಳವು ಮಾಡಿದ್ದು , ನಿರ್ಮಾಣ ಹಂತದಲ್ಲಿ ಇರುವ ಕಟ್ಟಡದ ಸ್ಥಳವನ್ನು ತೋರಿಸಿ ಕೊಟ್ಟಿದ್ದು , ಆ ಸಮಯ ಹಾಜರಿದ್ದು , ಪೊಲೀಸರು ಮಹಜರನ್ನು ತಯಾರಿಸಿರುತ್ತಾರೆ . ಆ ಸಂದರ್ಭದಲ್ಲಿ ನನ್ನ ಹಾಗೂ ಚಾಸಾ-9 ರವರ ಸಮಕ್ಷಮ ಆರೋಪಿ ತಕ್ಷೀರಿಗೆ ಉಪಯೋಗಿದ ಕಪ್ಪು ಬಣ್ಣದ ಬಜಾಜ್ ಕಂಪನಿಯ ಪಲ್ಸರ್ ಮೊಟಾರು ಸೈಕಲ ನಂ. ಕೆಎ-19 ಎಕ್ಸ್ 6926 ನ್ನು 11-00 ರಿಂದ 11-45 ಗಂಟೆಯವರೆಗೆ ಮಹಜರ್ ಮುಖೇನಾ ಸ್ವಾಧೀನ ಪಡಿಸಿಕೊಂಡಿರುತ್ತಾರೆ ಎಂದರೆ ಸರಿಯಲ್ಲ . ನಾನು ನನ್ನ ಹೇಳಿಕೆಯನ್ನೂ ಕೂಡ ನೀಡಿರುತ್ತೇನೇ ಎಂದರೆ ಸರಿಯಲ್ಲ . ಸಾಕ್ಷಿ ಹೇಳಿಕೆಯನ್ನು ಅಲ್ಲಗಳೆದ ಕಾರಣ ಹೇಳಿಕೆಯನ್ನು ನಿಪಿ-7 ಎಂದು ಗುರುತಿಸಲಾಯಿತು . ಈ ಪ್ರಕರಣದ ಬಗ್ಗೆ ತಿಳಿದಿದ್ದರೂ ಸಹ ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ .

ಪಾಟೀಸವಾಲುಃ ಆರೋಪಿಗಳ ಪರ ವಕೀಲರು ಪಾಟೀಸವಾಲು ಇಲ್ಲವೆಂದು ತಿಳಿಸಿರುತ್ತಾರೆ .

(ಮರುವಿಚಾರಣೆ ಇಲ್ಲ.)

ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು .

ಓದಿ ಹೆ.ಕೇ ಸ ಇದೆ .

ಸಹಿ/-

ವ್ಯ ನ್ಯಾ ಮತ್ತು ಪ್ರ.ದ.ನ್ಯಾದಂ.

ಮೂಡಬಿದಿರೆ